## ನೋಂದಣಿ ಮತ್ತು ಮುದ್ರಾಂಕ ಇಲಾಖೆ

### ಅಧಿಸೂಚನೆ

**ಸಂಖ್ಯೆ: ನೋ.ಮು/ಸಿ.ವಿ.ಸಿ /485/2017-18, ದಾವಣಗೆರೆ ಜಿಲ್ಲೆ, ದಿನಾಂಕ: 27-12-2018**

**ವಿಷಯ :** ದಾವಣಗೆರೆ ಜಿಲ್ಲಾ ನೋಂದಣಿ ಕಛೇರಿ ವ್ಯಾಪ್ತಿಯಲ್ಲಿನ ಉಪನೋಂದಣಿ ಕಛೇರಿಗಳ ವ್ಯಾಪ್ತಿಯಲ್ಲಿ ಬರುವ ಸ್ಥಿರಾಸ್ತಿಗಳ ನೋಂದಣಿಗಾಗಿ, ಪರಿಷ್ಕೃತ ಮಾರುಕಟ್ಟೆ ಮೌಲ್ಯಗಳ ಮಾರ್ಗಸೂಚಿಯ ದರಪಟ್ಟಿಯ ಕುರಿತು.

**ಉಲ್ಲೇಖ :** 1) ಹರಪನಹಳ್ಳಿ ಉಪಸಮಿತಿ ನಡವಳಿ ದಿ: 11-09-2018.

2) ಕೇಂದ್ರ ಮೌಲ್ಯ ಮಾಪನ ಸಮಿತಿ ಸಭೆಯ ನಡವಳಿ ದಿನಾಂಕ: 24-09-2018, ದಿನಾಂಕ:29-09-2018, ದಿನಾಂಕ:05-12-2018 ಮತ್ತು ದಿನಾಂಕ:07-12-2018.

1. ದಾವಣಗೆರೆ ಜಿಲ್ಲಾ ನೋಂದಣಿ ಕಛೇರಿಯ ವ್ಯಾಪ್ತಿಯಲ್ಲಿ ಬರುವ ಹರಪನಹಳ್ಳಿ ಉಪನೋಂದಣಿ ಕಛೇರಿ ವ್ಯಾಪ್ತಿಗೆ ಒಳಪಡುವ ಸ್ಥಿರಾಸ್ತಿಗಳ ಅಂದಾಜು ಸರಾಸರಿ ಮಾರುಕಟ್ಟೆ ಮೌಲ್ಯಗಳ ಮಾರ್ಗಸೂಚಿ ದರಗಳನ್ನು ಪರಿಷ್ಕರಿಸಿ ಹೊರಡಿಸಿದ ಉಲ್ಲೇಖ(1)ರನ್ವಯ ಸಾರ್ವಜನಿಕ ಆಕ್ಷೇಪಣೆ/ಸಲಹೆ/ಸೂಚನೆಗಳಿಗಾಗಿ ಪತ್ರಿಕೆಯಲ್ಲಿ ಪ್ರಕಟಣೆ ಹೊರಡಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಆಕ್ಷೇಪಣೆ/ಸಲಹೆ/ಸೂಚನೆಗಳನ್ನು ಸಲ್ಲಿಸುವಂತೆ ದಿನಾಂಕ: 09-08-2018 ರಂದು ಮೊದಲ ಸಭೆ ನಡೆಸಲಾಯಿತು.

2. ಪರಿಷ್ಕೃತ ಮಾರ್ಗಸೂಚಿ ದರಪಟ್ಟಿಗಳನ್ನ ಸಾರ್ವಜನಿಕರಿಗೆ ಲಭ್ಯವಾಗಿರುವಂತೆ ಆಯಾ ಉಪನೋಂದಣಿ ಕಛೇರಿಗಳಲ್ಲಿ/ ಜಿಲ್ಲಾನೋಂದಣಿ ಕಛೇರಿಯಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗಿತ್ತು. ದಿನಾಂಕ: 11-09-2018 ರಂದು ನಡೆದ ಮೌಲ್ಯಮಾಪನ ಉಪ-ಸಮಿತಿಗಳ ಸಭೆಯಲ್ಲಿ ಸಾರ್ವಜನಿಕರಿಂದ ಸ್ವೀಕೃತವಾದ ಆಕ್ಷೇಪಣೆ/ಸಲಹೆ/ಸೂಚನೆಗಳನ್ನು ಕೂಲಂಕುಷವಾಗಿ ಸಂಬಂಧಿಸಿದ ಉಪ-ಸಮಿತಿಗಳಲ್ಲಿ ಪರಿಶೀಲಿಸಿ, ಸೂಕ್ತ ಕ್ರಮಜರುಗಿಸಿ ಈ ಬಗ್ಗೆ ಕ್ರಮವಹಿಸಿರುವ ವಿಷಯಗಳನ್ನು ಉಲ್ಲೇಖ(2) ರ ಕೇಂದ್ರ ಮೌಲ್ಯ ಮಾಪನ ಸಮಿತಿಯಲ್ಲಿ ಆಡಳಿತಾತ್ಮಕ ಅನುಮೋದನೆ ಪಡೆದು ಅಂತಿಮಗೊಳಿಸಲಾಗಿದೆ.

3. ಕರ್ನಾಟಕ ಮುದ್ರಾಂಕ ಕಾಯ್ದೆ 1957ರ ಸೆಕ್ಷನ್ 45-ಬಿ ಮತ್ತು ಕರ್ನಾಟಕ ಮುದ್ರಾಂಕ (ಆಸ್ತಿಯ ಅಂದಾಜು ಸರಾಸರಿ ಮಾರುಕಟ್ಟೆ ಮೌಲ್ಯ ಮಾರ್ಗಸೂಚಿಯ ಪರಿಷ್ಕರಣೆ ಮತ್ತು ಪ್ರಕಟಣೆಗಾಗಿ ಕೇಂದ್ರ ಮೌಲ್ಯ ಮಾಪನ ಸಮಿತಿಯ ರಚನೆ) ನಿಯಮವಳಿಗಳು 2003ರ ನಿಯಮ 7(3)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮೌಲ್ಯ ಮಾಪನ ಉಪ-ಸಮಿತಿಯು ಸ್ಥಿರಾಸ್ತಿಗಳ ಅಂದಾಜು ಸರಾಸರಿ ಮಾರುಕಟ್ಟೆ ಮೌಲ್ಯಗಳ ಮಾರ್ಗಸೂಚಿಯ ದರಗಳನ್ನು ಈ ಮೂಲಕ ಪರಿಷ್ಕರಿಸಿ ಪ್ರಕಟಿಸಲಾಗಿದೆ. ಸದರಿ ಮಾರ್ಗಸೂಚಿ ದರಗಳು ಅನುಬಂಧದಲ್ಲಿರುವ ದಾವಣಗೆರೆ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಹರಪನಹಳ್ಳಿ ಉಪನೋಂದಣಿ ಕಛೇರಿ ವ್ಯಾಪ್ತಿಗೆ ಒಳಪಡುವ ಸ್ಥಿರಾಸ್ತಿಗಳು ಮತ್ತು ಕಟ್ಟಡಗಳಿಗೆ ಅನ್ವಯಿಸುತ್ತದೆ. **ಈ ಅಧಿಸೂಚನೆಯು ದಿನಾಂಕ: 01-01-2019 ರಿಂದ ಜಾರಿಗೆ ಬಂದಿದ್ದು, ಮುಂದಿನ ಆದೇಶದವರೆಗೆ ಜಾರಿಯಲ್ಲಿರುತ್ತದೆ.**

4. ಹರಪನಹಳ್ಳಿ ಉಪ ನೋಂದಣಿ ಕಛೇರಿಗಳ ವ್ಯಾಪ್ತಿಯಲ್ಲಿ ಬರುವ ಸ್ಥಿರಾಸ್ತಿಗಳ ಅಂದಾಜು ಸರಾಸರಿ ಮಾರುಕಟ್ಟೆ ಮೌಲ್ಯ ಮಾರ್ಗಸೂಚಿ ಹಾಗೂ ಕಟ್ಟಡಗಳಿಗೆ ಅನ್ವಯಿಸುವಂತೆ ದರಗಳನ್ನು ಪರಿಷ್ಕರಿಸಿ ಅನುಬಂಧ 1, ಅನುಬಂಧ 2 ಮತ್ತು ಅನುಬಂಧ 3 ರಲ್ಲಿ ಪ್ರಕಟಿಸಲಾಗಿದೆ.

ಗಿರೀಶ ಎನ್ ಬಿಸ್ತನಗೌಡರ
ಜಿಲ್ಲಾನೋಂದಣಾಧಿಕಾರಿಗಳು ಮತ್ತು ಮುದ್ರಾಂಕಗಳ ಉಪ-ಆಯುಕ್ತರು, ದಾವಣಗೆರೆ ಜಿಲ್ಲೆ
ಹಾಗೂ ಸದಸ್ಯರು ಕೇಂದ್ರ ಮೌಲ್ಯಮಾಪನ ಸಮಿತಿ

**ಅನುಬಂಧ-1 (ಬೆಂಗಳೂರು ನಗರ, ಗ್ರಾಮಾಂತರ ಮತ್ತು ರಾಮನಗರ ಹಾಗೂ ಮಂಗಳೂರು ನಗರ /ತಾಲ್ಲೂಕು, ಮುಲ್ಕಿ, ಉಡುಪಿ, ಮಂಗಳೂರು ಜಿಲ್ಲೆ ಹೊರತುಪಡಿಸಿ)**

**1. ಮೌಲ್ಯ ಮಾಪನಕ್ಕೆ ಸಂಬಂಧಿಸಿದಂತೆ ಅನ್ವಯಿಸುವ ವಿಶೇಷ ಸೂಚನೆಗಳು:**

1. ಅ. ಈ ಕೆಳಕಂಡ ಕೃಷಿ ಜಮೀನು (ಸ್ಥಳೀಯ ಸಂಸ್ಥೆಯಿಂದ 10 ಕಿ.ಮೀ ವ್ಯಾಪ್ತಿಯೊಳಗಿನ ಗ್ರಾಮಗಳಿಗೆ [ಲಗತ್ತಿಸಿರುವ ಪಟ್ಟಿ] ಹಾಗೂ 10 ಕಿ.ಮೀ ಹೊರಗಿನ ಗ್ರಾಮಗಳ ಗ್ರಾಮಠಾಣ ಪ್ರದೇಶದಿಂದ 1 ಕಿ.ಮೀ ವ್ಯಾಪ್ತಿಯೊಳಗೆ ಮಾತ್ರ) ಅಥವಾ ಭೂಪರಿವರ್ತನೆಯಾದ ಪೂರ್ಣ ವಿಸ್ತೀರ್ಣದ (ಸರ್ವೆ ನಂಬರಿನ ಸಂಪೂರ್ಣ ವಿಸ್ತೀರ್ಣದಂತೆ ಹಾಗೂ ಭಾಗಶಃ ಇಲ್ಲದಂತೆ)

*ಅಭಿವೃದ್ಧಿಹೊಂದದ ಸ್ವತ್ತನ್ನು ಪರಭಾರೆ ಮಾಡಿದಾಗ ಕೆಳಕಂಡಂತೆ ದರಗಳನ್ನು ಅಳವಡಿಸುವುದು.

| | | |
|---|---|---|
| (i) | 5 ಗುಂಟೆ ವಿಸ್ತೀರ್ಣದ ವರೆಗಿನ ಜಮೀನಿಗೆ (5 ಗುಂಟೆ ಸೇರಿದಂತೆ) | ಸಂಬಂಧಿಸಿದ ಆಯಾ ಪ್ರದೇಶದ ನಿವೇಶನ ದರ ಅಥವಾ ಆಯಾ ಕೃಷಿ ಜಮೀನಿನ ತರಹದ ದರ (ಪ್ರತಿ ಎಕರೆ ದರಗಳನ್ನು ಪ್ರತಿ ಚದರ ಮೀಟರ್‌ಗೆ ಪರಿವರ್ತಿಸಿದಾಗ ಬರುವ ದರ), ಯಾವುದು ಹೆಚ್ಚು ಅದನ್ನು ಅಳವಡಿಸತಕ್ಕದ್ದು. |

*ನಿವೇಶನ ದರ = ಯಾವ ಉದ್ದೇಶಕ್ಕೆ ಭೂಪರಿವರ್ತನೆ ಆಗಿರುತ್ತದೆಯೋ ಆ ಉದ್ದೇಶದ (ಅಂದರೆ ವಸತಿ, ಕೈಗಾರಿಕೆ ಮತ್ತು ವಾಣಿಜ್ಯಯೋಪಯೋಗಿ/ ವಸತಿಯೇತರ ಉದ್ದೇಶಗಳು) ಸ್ವತ್ತು/ಜಮೀನುಗಳಿಗೆ ಆಯಾ ಪ್ರದೇಶದ ನಿವೇಶನ ದರವನ್ನು (ವಸತಿಯೇತರ/ವಾಣಿಜ್ಯಯೋಪಯೋಗಿ/ ಸ್ವತ್ತಿನ ದರದೊಂದಿಗೆ) ಅಳವಡಿಸಿಕೊಳ್ಳತಕ್ಕದ್ದು.*

**ಸಿವಿಸಿ ನಿಯಮಗಳು 2003 ರ ನಿಯಮ 6(2)(a) ರನ್ವಯ ಈ ಕೆಳಕಂಡಂತೆ ದರ ನಿಗದಿಪಡಿಸಿದೆ. ಪಟ್ಟಣ ಪಂಚಾಯ್ತಿ/ಪುರಸಭೆ/ನಗರಸಭೆ/ಮಹಾನಗರ ಪಾಲಿಕೆ ವ್ಯಾಪ್ತಿಯ "ಒಳಗೆ ಬರುವ ಸ್ಥಿರಾಸ್ತಿಗಳಿಗೆ" ಸಂಬಂಧಿಸಿದಂತೆ:**

ಆ. ಕೆಳಕಂಡ ಭೂಪರಿವರ್ತನೆಯಾದ ಪೂರ್ಣ ವಿಸ್ತೀರ್ಣದ (ಸರ್ವೆ ನಂಬರಿನ ಸಂಪೂರ್ಣ ವಿಸ್ತೀರ್ಣದಂತೆ ಹಾಗೂ ಭಾಗಶಃ ಇಲ್ಲದಂತೆ) ಅಭಿವೃದ್ಧಿ ಹೊಂದದ ಸ್ವತ್ತನ್ನು ಪರಭಾರೆ ಮಾಡಿದಾಗ ಕೆಳಕಂಡಂತೆ ದರಗಳನ್ನು ಅಳವಡಿಸುವುದು.

| | | | |
|---|---|---|---|
| (ii) | 5 ಗುಂಟೆಯಿಂದ ಮೇಲ್ಪಟ್ಟು 7.5 ಗುಂಟೆಯವರೆಗೆ ವಿಸ್ತೀರ್ಣದ ಜಮೀನಿಗೆ (7.5 ಗುಂಟೆ ಸೇರಿದಂತೆ) | ಸಂಬಂಧಿಸಿದ ಆಯಾ ಪ್ರದೇಶದ ನಿವೇಶನ ದರದಲ್ಲಿ 70% ರಷ್ಟು ಅಥವಾ ಆಯಾ ಕೃಷಿ ಜಮೀನಿನ ತರಹದ ದರ (ಪ್ರತಿ ಎಕರೆ ದರಗಳನ್ನು ಪ್ರತಿ ಚದರ ಮೀಟರ್‌ಗೆ ಪರಿವರ್ತಿಸಿದಾಗ ಬರುವ ದರ), ಯಾವುದು ಹೆಚ್ಚು ಅದನ್ನು ಅಳವಡಿಸತಕ್ಕದ್ದು. | |
| (iii) | 7.5 ಗುಂಟೆಯಿಂದ ಮೇಲ್ಪಟ್ಟು 10 ಗುಂಟೆಯವರೆಗೆ ವಿಸ್ತೀರ್ಣದ ಜಮೀನಿಗೆ (10 ಗುಂಟೆ ಸೇರಿದಂತೆ) | ಸಂಬಂಧಿಸಿದ ಆಯಾ ಪ್ರದೇಶದ ನಿವೇಶನ ದರದಲ್ಲಿ 65% ರಷ್ಟು ಅಥವಾ ಆಯಾ ಕೃಷಿ ಜಮೀನಿನ ತರಹದ ದರ (ಪ್ರತಿ ಎಕರೆ ದರಗಳನ್ನು ಪ್ರತಿ ಚದರ ಮೀಟರ್‌ಗೆ ಪರಿವರ್ತಿಸಿದಾಗ ಬರುವ ದರ), ಯಾವುದು ಹೆಚ್ಚು ಅದನ್ನು ಅಳವಡಿಸತಕ್ಕದ್ದು. | |
| (iv) | 10 ಗುಂಟೆಯಿಂದ ಮೇಲ್ಪಟ್ಟು 20 ಗುಂಟೆಯವರೆಗೆ ವಿಸ್ತೀರ್ಣದ ಜಮೀನಿಗೆ (20 ಗುಂಟೆ ಸೇರಿದಂತೆ) | ಆಯಾ ಪ್ರದೇಶದ ನಿವೇಶನದ ದರವನ್ನು 60% ರಷ್ಟು ಅಥವಾ ಆಯಾ ಕೃಷಿ ಜಮೀನಿನ ತರಹದ ದರ (ಪ್ರತಿ ಎಕರೆ ದರಗಳನ್ನು ಪ್ರತಿ ಚದರ ಮೀಟರ್‌ಗೆ ಪರಿವರ್ತಿಸಿದಾಗ ಬರುವ ದರ), ಯಾವುದು ಹೆಚ್ಚು ಅದನ್ನು ಅಳವಡಿಸತಕ್ಕದ್ದು. | |
| (v) | 20 ಗುಂಟೆಯಿಂದ ಮೇಲ್ಪಟ್ಟು 40 ಗುಂಟೆಯವರೆಗೆ (1 ಎಕರೆ) ವಿಸ್ತೀರ್ಣದ ಜಮೀನಿಗೆ (40 ಗುಂಟೆ ಸೇರಿದಂತೆ) | ಆಯಾ ಪ್ರದೇಶದ ನಿವೇಶನದ ದರವನ್ನು 55% ರಷ್ಟು ಅಥವಾ ಆಯಾ ಕೃಷಿ ಜಮೀನಿನ ತರಹದ ದರ (ಪ್ರತಿ ಎಕರೆ ದರಗಳನ್ನು ಪ್ರತಿ ಚದರ ಮೀಟರ್‌ಗೆ ಪರಿವರ್ತಿಸಿದಾಗ ಬರುವ ದರ), ಯಾವುದು ಹೆಚ್ಚು ಅದನ್ನು ಅಳವಡಿಸತಕ್ಕದ್ದು. | |
| (vi) | 1 ಎಕರೆ ಮೇಲ್ಪಟ್ಟ ವಿಸ್ತೀರ್ಣದ ಜಮೀನಿಗೆ | ಆಯಾ ಪ್ರದೇಶದ ನಿವೇಶನದ ದರವನ್ನು 40% ರಷ್ಟು ಅಥವಾ ಆಯಾ ಕೃಷಿ ಜಮೀನಿನ ಈ ಕೆಳಗಿನ ತರಹದ | |
| | | ಕೈಗಾರಿಕೋಪಯೋಗಿ | 55% (ಮೂಲ ಕೃಷಿ ಜಮೀನಿನ ದರಕ್ಕೆ ಹೆಚ್ಚಿನ ದರ) |
| | | ವಾಸೋಪಯೋಗಿ | 65% (ಮೂಲ ಕೃಷಿ ಜಮೀನಿನ ದರಕ್ಕೆ ಹೆಚ್ಚಿನ ದರ) |
| | | ವಾಣಿಜ್ಯೋಪಯೋಗಿ/ ವಸತಿಯೇತರ | 80% (ಮೂಲ ಕೃಷಿ ಜಮೀನಿನ ದರಕ್ಕೆ ಹೆಚ್ಚಿನ ದರ) |
| | | ದರ ಯಾವುದು ಹೆಚ್ಚು ಅದನ್ನು ಅಳವಡಿಸತಕ್ಕದ್ದು. | |

**ನಿವೇಶನ ದರ** = ಯಾವ ಉದ್ದೇಶಕ್ಕೆ ಭೂಪರಿವರ್ತನೆ ಆಗಿರುತ್ತದೆಯೋ ಆ ಉದ್ದೇಶದ (ಅಂದರೆ ವಸತಿ, ಕೈಗಾರಿಕೆ ಮತ್ತು ವಾಣಿಜ್ಯಯೋಪಯೋಗಿ/ ವಸತಿಯೇತರ ಉದ್ದೇಶಗಳು) ಸ್ವತ್ತು/ಜಮೀನುಗಳಿಗೆ ಸಕ್ಷಮ ಪ್ರಾಧಿಕಾರದ ನಿವೇಶನ ದರವನ್ನು (ವಸತಿಯೇತರ/ವಾಣಿಜ್ಯಯೋಪಯೋಗಿ/ ಸ್ವತ್ತಿನ ದರದೊಂದಿಗೆ) ಅಳವಡಿಸಿಕೊಳ್ಳತಕ್ಕದ್ದು.

**ನಿವೇಶನ ದರ** = ಯಾವ ಉದ್ದೇಶಕ್ಕೆ ಭೂಪರಿವರ್ತನೆ ಆಗಿರುತ್ತದೆಯೋ ಆ ಉದ್ದೇಶದ (ಅಂದರೆ ವಸತಿ, ಕೈಗಾರಿಕೆ ಮತ್ತು ವಾಣಿಜ್ಯಯೋಪಯೋಗಿ/ ವಸತಿಯೇತರ ಉದ್ದೇಶಗಳು) ಸ್ವತ್ತು/ಜಮೀನುಗಳಿಗೆ ಸಕ್ಷಮ ಪ್ರಾಧಿಕಾರದ ನಿವೇಶನ ದರವನ್ನು (ವಸತಿಯೇತರ/ವಾಣಿಜ್ಯಯೋಪಯೋಗಿ/ ಸ್ವತ್ತಿನ ದರದೊಂದಿಗೆ) ಅಳವಡಿಸಿಕೊಳ್ಳತಕ್ಕದ್ದು.

1. ಪಟ್ಟಣ ಪಂಚಾಯ್ತಿ/ಪುರಸಭೆ/ನಗರಸಭೆ/ಮಹಾನಗರ ಪಾಲಿಕೆ ವ್ಯಾಪ್ತಿಯ "ಹೊರಗೆ ಬರುವ ಸ್ಥಿರಾಸ್ತಿಗಳಿಗೆ" ಸಂಬಂಧಿಸಿದಂತೆ:

ಈ ಕೆಳಕಂಡ ಉದ್ದೇಶಕ್ಕಾಗಿ ಭೂಪರಿವರ್ತನೆಯಾದ ಪೂರ್ಣ ವಿಸ್ತೀರ್ಣದ (ಸರ್ವೆ ನಂಬರಿನ ಸಂಪೂರ್ಣ ವಿಸ್ತೀರ್ಣದಂತೆ ಹಾಗೂ ಭಾಗಶಃ ಇಲ್ಲದಂತೆ) *ಅಭಿವೃದ್ಧಿಹೊಂದದ ಸ್ವತ್ತನ್ನು ಪರಭಾರೆ ಮಾಡಿದಾಗ ಕೆಳಕಂಡಂತೆ ಹೆಚ್ಚಳ ದರವನ್ನು ಮೂಲ ಕೃಷಿ ದರಗಳಿಗೆ ಅಳವಡಿಸತಕ್ಕದ್ದು.

| | |
|---|---|
| (i) | 5 ಗುಂಟೆ ಮೇಲ್ಪಟ್ಟು 10 ಗುಂಟೆವರೆಗಿನ ಜಮೀನುಗಳಿಗೆ ಶೇ 65 ರಷ್ಟು ಆಯಾ ಮೂಲ ಕೃಷಿ ಜಮೀನಿನ ಹೆಚ್ಚಿನ ದರಕ್ಕೆ ಅಳವಡಿಸತಕ್ಕದ್ದು. |